## ಕರ್ನಾಟಕ ವಿಧಾನ ಪರಿಷತ್ತು

**ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** : 2267

**ಮಾನ್ಯ ಸದಸ್ಯರ ಹೆಸರು** : ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ)

**ಉತ್ತರಿಸುವ ದಿನಾಂಕ** : 26/03/2026

**ಉತ್ತರಿಸುವ ಸಚಿವರು** : ಗೃಹ ಸಚಿವರು

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಇತ್ತೀಚಿನ ದಿನಗಳಲ್ಲಿ ಸೈಬರ್ ಅಪರಾಧಗಳು ವ್ಯಾಪಕವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು: | **ರಾಜ್ಯದಲ್ಲಿ ಸೈಬರ್ ಅಪರಾಧಗಳು ದಾಖಲಾಗುತ್ತಿದ್ದು, ಸದರಿ ಸೈಬರ್ ಅಪರಾಧ ಪ್ರಕರಣಗಳನ್ನು ತಡೆಗಟ್ಟುವಲ್ಲಿ ಕೈಗೊಂಡಿರುವ ಕ್ರಮಗಳ ವಿವರಗಳು ಈ ಕೆಳಕಂಡಂತಿವೆ:-**<br>ರಾಜ್ಯದಲ್ಲಿ ಇಂಟರ್‌ನೆಟ್, ಮೊಬೈಲ್ ಫೋನ್, ಆನ್ ಲೈನ್ ಮೂಲಕ ವಂಚನೆಗೊಳಗಾಗುತ್ತಿರುವ ಪ್ರಕರಣಗಳಿಗೆ ಸಂಬಂಧಿಸಿದಂತೆ ಪ್ರತಿದಿನ ದಾಖಲಾಗುವ ಪ್ರಕರಣಗಳನ್ನು ಶೀಘ್ರವಾಗಿ ವಿಚಾರಣೆ ನಡೆಸಲು **ಸರ್ಕಾರದ ಆದೇಶ ಸಂಖ್ಯೆ: ಹೆಚ್‌ಡಿ /177/ಪಿಒಪಿ/2024, ದಿನಾಂಕ:01/08/2025**ರಲ್ಲಿ ರಾಜ್ಯದ 45 CEN ಪೊಲೀಸ್ ಠಾಣೆಗಳನ್ನು ಸೈಬರ್ ಅಪರಾಧ ಪೊಲೀಸ್ ಠಾಣೆಗಳೆಂದು **(Cyber Crime Police Station)** ಎಂದು ಮರುಪದನಾಮೀಕರಿಸಿ ಆದೇಶಿಸಿದೆ. ಸೈಬರ್ ಅಪರಾಧ ಪೊಲೀಸ್ ಠಾಣೆಗಳಲ್ಲಿ **Information Technology Act-2000 & IPC/BNS** ಅಡಿಯಲ್ಲಿ ದಾಖಲಾಗುವ ಪ್ರಕರಣಗಳನ್ನು ದಾಖಲಿಸಲು ಹಾಗೂ ತನಿಖೆ ಕೈಗೊಳ್ಳಲು ಅಧಿಕಾರ ನೀಡಿ, ವ್ಯಾಪ್ತಿ ನಿಗದಿಪಡಿಸಿ ಅಧಿಸೂಚಿಸಲಾಗಿದೆ.<br>➢ ರಾಜ್ಯದಲ್ಲಿ DGP ಸೈಬರ್ ಕಮಾಂಡ್ ಹುದ್ದೆ ಸೃಜಿಸಲಾಗಿದೆ. ಇವರು ಸೈಬರ್ ಕ್ರೈಂ ಪೋಲಿಸ್ ಠಾಣೆಗಳ ಕಮಾಂಡಿಂಗ್ ಅಧಿಕಾರಿಯಾಗಿರುತ್ತಾರೆ. ಎಲ್ಲಾ ಸೈಬರ್ ಕ್ರೈಂ ಪೊಲೀಸ್ ಠಾಣೆಗಳು ನೇರವಾಗಿ ಇವರಿಗೆ ಕಾರ್ಯ ವರದಿ ಸಲ್ಲಿಸಿಕೊಂಡು ಕರ್ತವ್ಯ ನಿರ್ವಹಿಸುತ್ತಿವೆ. ಈ ಕ್ರಮದಿಂದ ಸೈಬರ್ ಅಪರಾಧಗಳ ತನಿಖಾ ವೇಗ ಹೆಚ್ಚಲಿದೆ.<br>➢ ಭಾರತದ ಪ್ರಥಮ ವಿಶೇಷ ಸೈಬರ್ ಪೊಲೀಸ್ ಠಾಣೆಯನ್ನು 2001ರಲ್ಲಿ ಬೆಂಗಳೂರು ನಗರದಲ್ಲಿ ಸ್ಥಾಪಿಸಲಾಯಿತು. |

| | | |
|---|---|---|
| | | ➢ ಸಿಐಡಿ ಅಡಿಯಲ್ಲಿ ಸೈಬರ್ ಕ್ರೈಂ ವಿಭಾಗವು ರಾಜ್ಯದ ಸೈಬರ್ ಅಪರಾಧ ತನಿಖೆಗೆ ಕೇಂದ್ರ ಕಛೇರಿ ಆಗಿದ್ದು, ಇತರ ಘಟಕಗಳೊಂದಿಗೆ ಸಮನ್ವಯ ಮಾಡುತ್ತದೆ.<br>➢ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಕೇಂದ್ರ ಸರ್ಕಾರದಿಂದ ಗೃಹ ಸಚಿವಾಲಯದ ಎನ್.ಸಿ.ಆರ್.ಪಿ (National Cyber Crime Reporting Portal)ನಲ್ಲಿ ದೂರುಗಳನ್ನು ದಾಖಲಿಸಲು ಸಾರ್ವಜನಿಕರಿಗೆ ಅವಕಾಶವಿದ್ದು, ದೂರುಗಳನ್ನು ದಾಖಲಿಸಿದ ನಂತರ ಈ ಪೋರ್ಟಲ್ ಮುಖಾಂತರ ಪಡೆದುಕೊಂಡು ತನಿಖೆಯನ್ನು ಕೈಗೊಂಡಿರುತ್ತದೆ.<br>➢ ಸೈಬರ್ ಅಪರಾಧಗಳಿಗೆ ಸಂಬಂಧಿಸಿದಂತೆ ಪ್ರತ್ಯೇಕವಾದ ನ್ಯಾಯಾಲಯವನ್ನು ಸೃಜನೆ ಮಾಡಲಾಗಿದೆ.<br>➢ ಪ್ರತಿ ಸೈಬರ್ ಠಾಣೆಯಲ್ಲಿ ಸೈಬರ್ ಕ್ರೈಂಗೆ ಸಂಬಂಧಿಸಿದಂತೆ ಪ್ರಕರಣಗಳ ತನಿಖೆಯಯನ್ನು ಕೈಗೊಳ್ಳಲು ಪೊಲೀಸ್ ಇನ್ಸ್‌ಪೆಕ್ಟರ್ ಹುದ್ದೆಯನ್ನು ಡಿವೈಎಸ್ಪಿ/ಎಸಿಪಿ ಹುದ್ದೆಗಳನ್ನಾಗಿ ಮೇಲ್ದರ್ಜೆಗೇರಿಸಿ ಆದೇಶಿಸಿರುತ್ತದೆ.<br>➢ ಠಾಣಾ ಸರಹದ್ದಿನಲ್ಲಿ ಬರುವಂತಹ ಕಂಪನಿಗಳು, ಶಾಲಾ ಕಾಲೇಜುಗಳು, ಅಪಾರ್ಟ್‌ಮೆಂಟ್ ಪಾರ್ಕ್ ಮತ್ತು ಮುಂತಾದ ಸ್ಥಳಗಳಲ್ಲಿ ಸೈಬರ್ ಕ್ರೈಂ ಬಗ್ಗೆ ಜಾಗೃತಿ ಕಾರ್ಯ ಕ್ರಮಗಳನ್ನು ಕೈಗೊಂಡಿರುತ್ತದೆ.<br>➢ ಟಿ.ವಿ. ಮಾಧ್ಯಮ ಮತ್ತು ಪತ್ರಿಕಾ ಮಾಧ್ಯಮಗಳಲ್ಲಿ ಡಿಜಿಟಲ್ ಅರೆಸ್ಟ್ ಬಗ್ಗೆ ಜಾಹಿರಾತು ನೀಡಲಾಗಿರುತ್ತದೆ.<br>➢ ಸೈಬರ್ ಅಪರಾಧ ಪ್ರಕರಣಗಳನ್ನು ತ್ವರಿತ ಗತಿಯಲ್ಲಿ ಪತ್ತೆ ಹಚ್ಚುವ ಸಂಬಂಧ ಸೈಬರ್ ಕಮಾಂಡರ್ ಯುನಿಟ್ ರಚನೆಯಾಗಿರುತ್ತದೆ.<br>➢ ಬ್ಯಾಂಕ್‌ಗಳ ನೋಡಲ್ ಅಧಿಕಾರಿಗಳಿಗೆ ಮಾಸಿಕ ಸಭೆಗಳನ್ನು ತೆಗದುಕೊಂಡು ಸೈಬರ್ ಪ್ರಕರಣಗಳಲ್ಲಿ ಭಾಗಿಯಾಗುವ ಖಾತೆಗಳ ಮೇಲೆ ನಿಗಾವಹಿಸಿ ಕ್ರಮ ಕೈಗೊಳ್ಳುವಂತೆ ಸೂಚಿಸಲಾಗಿರುತ್ತದೆ.<br>➢ ಸಿಸಿಯು ಘಟಕದಿಂದ ಸಾಮಾಜಿಕ ಜಾಲತಾಣಗಳಾದ ಫೇಸ್‌ಬುಕ್, ವಾಟ್ಸಆಪ್ ಹಾಗೂ ಟ್ವಿಟರ್‌ಗಳ ಮೂಲಕ ಸೈಬರ್ ಜಾಗೃತಿಯ ಸಂದೇಶಗಳನ್ನು ರವಾನಿಸುವ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ನೀಡಲಾಗುತ್ತಿದೆ. |

- ಶಾಲಾ ಕಾಲೇಜುಗಳಿಗೆ, ಇತರೆ ಸಂಸ್ಥೆಗಳಿಗೆ ಭೇಟಿ ನೀಡಿ ವಿದ್ಯಾರ್ಥಿ ಹಾಗೂ ಸಾರ್ವಜನಿಕರುಗಳಿಗೆ ಡಿಜಿಟಲ್ ಅರೆಸ್ಟ್ ಹಾಗೂ ಇತರ ವಂಚನೆಗಳ ಬಗ್ಗೆ ಜಾಗೃತಿ ಮೂಡಿಸಲು ಜಾಗೃತಾ ಕಾರ್ಯಕ್ರಮಗಳನ್ನು ಕೈಗೊಳ್ಳಲಾಗುತ್ತಿದೆ.
- ಸೈಬರ್ ಅಪರಾಧ ಪ್ರಕರಣಗಳಲ್ಲಿ ಆರೋಪಿಗಳ ಮೇಲೆ ಕಠಿಣ ಕಾನೂನು ಕ್ರಮಕೈಗೊಳ್ಳಲು ಐಟಿ ಕಾಯ್ದೆ ಹಾಗೂ BNSನ ವಿವಿಧ ಕಲಂಗಳ ಅಡಿಯಲ್ಲಿ ಪ್ರಕರಣಗಳನ್ನು ದಾಖಲಿಸಿಕೊಂಡು ಕಾನೂನು ಕ್ರಮ ಜರುಗಿಸಲಾಗುತ್ತಿದೆ.
- ಸೈಬರ್ ಅಪರಾಧ ಸಹಾಯವಾಣಿಗಳಿಗೆ "ಗೋಲ್ಡನ್ ಅವರ್" ನಲ್ಲಿ ಬರುವ ದೂರುಗಳನ್ನು ಸ್ವೀಕರಿಸಲು ಕರ್ನಾಟಕ ಪೊಲೀಸ್ ಇಲಾಖೆ 1930 ಹೆಲ್ಪ್‌ಲೈನ್ ಅನ್ನು ವೆಬ್‌ಬಾಟ್ ಸೌಲಭ್ಯದಿಂದ ಉನ್ನತೀಕರಿಸಿದೆ. ಇದರಿಂದ SMS ಮುಖಾಂತರ ಸ್ವಯಂ ಮಾಹಿತಿ ನೊಂದಣಿ ಮಾಡಿಕೊಳ್ಳ ಬಹುದಾಗಿರುತ್ತದೆ. ದೂರುಗಳನ್ನು "ಹಣಕಾಸು ಮತ್ತು ಹಣಕಾಸೇತರ" ಎಂದು ವಿಂಗಡಿಸುವ IVR ವ್ಯವಸ್ಥೆ ಕಲ್ಪಿಸಲಾಗಿರುತ್ತದೆ. ಹೆಚ್ಚು ಕರೆಗಳು ಬಂದಾಗ ಆಟೋಮೇಟೆಡ್ ಕರೆ ವ್ಯವಸ್ಥೆ ಮೂಲಕ ಧ್ವನಿ ಮಾರ್ಗದರ್ಶನ ಸೌಲಭ್ಯವಿರುತ್ತದೆ. ದೂರುದಾರರು ತಮ್ಮ ದೂರಿನ ಸ್ಥಿತಿ ಹಂತವನ್ನು ತಿಳಿದುಕೊಳ್ಳಬಹುದಾಗಿರುತ್ತದೆ. 24/7 ಕಾಲ್ ಸೆಂಟರ್ ಕರ್ತವ್ಯ ನಿರ್ವಹಿಸುತ್ತಿರುತ್ತದೆ.
- ರಾಜ್ಯದಲ್ಲಿ **"ಮನೆ-ಮನೆಗೆ ಪೊಲೀಸ್"** ಎಂಬ ನೂತನ ಪರಿಕಲ್ಪನೆಯನ್ನು ಜಾರಿಗೊಳಿಸುವ ಮೂಲಕ ಪ್ರತಿ ಮನೆ-ಮನೆಗೆ ಪೊಲೀಸ್ ಭೇಟಿ ನೀಡುವ ಮೂಲಕ ಸಮುದಾಯ ಪೊಲೀಸ್ ವ್ಯವಸ್ಥೆಯನ್ನು ಬಲಪಡಿಸಲಾಗಿದೆ.
- ಸ್ಥಾಯಿ ಆದೇಶ ಸಂಖ್ಯೆ:1053 ರಲ್ಲಿ ಏಕಾಂಗಿಯಾಗಿ ವಾಸಿಸುವ ಹಿರಿಯ ನಾಗರಿಕರಿಗೆ ಸುರಕ್ಷೆ ಮತ್ತು ವಿಶ್ವಾಸ ನೀಡುವ ಆಶಾಕಿರಣವಾಗಿ **"ಆಸರೆ"** ಎಂಬ ಸಮುದಾಯ ಪೊಲೀಸ್ ಪರಿಕಲ್ಪನೆಯನ್ನು ಅನುಷ್ಠಾನಗೊಳಿಸಲಾಗಿದೆ.
- ಸಂತ್ರಸ್ಥರ ದೂರು/ಅವಹಾಲುಗಳು, ಹೇಳಿಕೆಗಳು ಜೀವಬೆದರಿಕೆ ಇದ್ದರೆ ಅಗತ್ಯ ರಕ್ಷಣೆ ಜಾಮೀನು ಅರ್ಜಿಗಳು ಇದ್ದರೆ ಪರಿಶೀಲನೆ ಮುಂತಾದ

| | | |
|---|---|---|
| | | ಸಮಸ್ಯೆಗಳನ್ನು ಆಲಿಸಲು **ಪ್ರತಿ ತಿಂಗಳ 3ನೇ ಭಾನುವಾರವನ್ನು ಸಂತ್ರಸ್ತರ/ದೂರುದಾರರ (Victim Day)** ನೊಂದವರ ದಿನವೆಂಬ ಕಾರ್ಯಕ್ರಮವನ್ನು ಠಾಣಾ ವ್ಯಾಪ್ತಿಯಲ್ಲಿ ಆಯೋಜಿಸಲಾಗುತ್ತಿದೆ. |
| ಆ) | ರಾಜ್ಯದಲ್ಲಿ ದಾಖಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯದಲ್ಲಿ ಕಳೆದ 03 ವರ್ಷಗಳಲ್ಲಿ ದಾಖಲಾದ ಸೈಬರ್ ಅಪರಾಧಗಳ ಪ್ರಕರಣಗಳ ಜಿಲ್ಲಾವಾರು ವಿವರಗಳನ್ನು **ಅನುಬಂಧದಲ್ಲಿ** ಒದಗಿಸಲಾಗಿದೆ. |
| ಇ) | ಇಲ್ಲಿಯವರೆಗೆ ಇದನ್ನು ನಿಯಂತ್ರಿಸಲು ತಾಂತ್ರಿಕವಾಗಿ ಸಶಕ್ತ ಪ್ರತ್ಯೇಕ ವಿಭಾಗಗಳನ್ನು ಸ್ಥಾಪಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ? (ವಿವರ ನೀಡುವುದು) | ರಾಜ್ಯದಲ್ಲಿ ಹೆಚ್ಚುತ್ತಿರುವ ಸೈಬರ್ ಅಪರಾಧ ಪ್ರಕರಣಗಳನ್ನು ಸುಗಮವಾಗಿ ಮತ್ತು ಸಮರ್ಪಕವಾಗಿ ತಡೆಗಟ್ಟುವ/ತನಿಖೆ ಕೈಗೊಳ್ಳುವ ನಿಟ್ಟಿನಲ್ಲಿ ಸರ್ಕಾರದ ಆದೇಶ ಸಂಖ್ಯೆ:ಹೆಚ್‌ಡಿ/177/ಪಿಓಪಿ/2024, ದಿನಾಂಕ:09.04.2025 ರನ್ವಯ ಸೈಬರ್ ಕಮಾಂಡ್ ಘಟಕವನ್ನು(Cyber Command Unit) ಸೃಜಿಸಿ ಆದೇಶಿಸಲಾಗಿದ್ದು, ಪ್ರಸ್ತುತ ಘಟಕವು ಪೊಲೀಸ್ ಮಹಾನಿರ್ದೇಶಕ ದರ್ಜೆಯ ಅಧಿಕಾರಿಯವರ ನೇತೃತ್ವದಲ್ಲಿ ಕಾರ್ಯನಿರ್ವಹಿಸುತ್ತಿದೆ. |

**ಸಂಖ್ಯೆ: ಹೆಚ್‌ಡಿ 40 ಪಿಸಿಕ್ಯೂ 2026**

(ಡಾ: ಜಿ. ಪರಮೇಶ್ವರ)
ಗೃಹ ಸಚಿವರು